ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಪತ್ರಿಕಾ ಪ್ರಕಟಣೆ/2020 ದಿನಾಂಕ: 06-07-2020

## ಪತ್ರಿಕಾ ಪ್ರಕಟಣೆ

**ಡಿಸಿಇಟಿ – 2020 – (ಅ) ಅನ್‌ಲೈನ್ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ (ಆ) ಪರೀಕ್ಷಾ ಕೇಂದ್ರಗಳ ಸೇರ್ಪಡೆ ಮತ್ತು ಎಡಿಟಿಂಗ್ (ಅರ್ಜಿಯಲ್ಲಿನ ಮಾಹಿತಿ ಬದಲಾವಣೆ)**

ಅ. ಡಿಪ್ಲೊಮ ಅಭ್ಯರ್ಥಿಗಳಿಗೆ 2020ನೇ ಸಾಲಿನ ಎರಡನೇ ವರ್ಷದ / ಮೂರನೇ ಸೆಮೆಸ್ಟರ್ ಇಂಜಿನಿಯರಿಂಗ್ ಕೋರ್ಸುಗಳ ಪ್ರವೇಶಾತಿಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಮೊತ್ತೊಂದು ಅಂತಿಮ ಅವಕಾಶ ನೀಡಲಾಗುವುದು. ಇಲ್ಲಿಯವರೆಗೆ ಅರ್ಜಿ ಸಲ್ಲಿಸದೇ ಇರುವ ಅಭ್ಯರ್ಥಿಗಳು ದಿನಾಂಕ 06-07-2020 ರ ಸಂಜೆ 6.00 ನಂತರ ದಿನಾಂಕ 09-07-2020 ಸಂಜೆ 6.30 ರವರೆಗೆ ಆನ್‌ಲೈನ್ ಮೂಲಕ ಸಲ್ಲಿಸಿ, ದಿನಾಂಕ 10-07-2020 ರೊಳಗಾಗಿ ಶುಲ್ಕವನ್ನು ಪಾವತಿಸಬಹುದು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಆದರೆ ಇಲ್ಲಿಯವರೆಗೆ ಶುಲ್ಕ ಪಾವತಿಸದೇ ಇರುವ ಅಭ್ಯರ್ಥಿಗಳೂ ಸಹ ಶುಲ್ಕವನ್ನು ಪಾವತಿಸಬಹುದು.

ಆ. ರಾಜ್ಯದಲ್ಲಿನ ಕೋವಿಡ್-19 ಪರಿಸ್ಥಿತಿಯಿಂದಾಗಿ, ಅಭ್ಯರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅನುಕೂಲ ಮಾಡುವ ದೃಷ್ಟಿಯಲ್ಲಿ ಡಿಸಿಇಟಿ-2020 ಪರೀಕ್ಷೆಯನ್ನು ಈಗಾಗಲೇ ಪ್ರಕಟಿಸಿರುವ ಕೇಂದ್ರಗಳ ಜೊತೆಯಲ್ಲಿ ಹೆಚ್ಚುವರಿಯಾಗಿ ಆಯ್ದ ಕೇಂದ್ರಗಳಲ್ಲಿ ನಡೆಸಲು ಕ್ರಮವಹಿಸಲಾಗುತ್ತಿದೆ. ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಹೊಸದಾಗಿ ಸೇರ್ಪಡೆ ಮಾಡಿದ ಸ್ಥಳಗಳನ್ನು ಪರಿಶೀಲಿಸಿದ ನಂತರ ಅಗತ್ಯವಿದ್ದಲ್ಲಿ ಅಭ್ಯರ್ಥಿಗಳು ಈ ಮೊದಲೇ ನೀಡಿದ್ದ ಪರೀಕ್ಷಾ ಕೇಂದ್ರವನ್ನು ಈ ಮೇಲಿನ ವೇಳಾಪಟ್ಟಿಯಂತೆ ಬದಲಾಯಿಸಿಕೊಳ್ಳಲು ಮತ್ತು ಈಗಾಗಲೇ ಸಲ್ಲಿಸಿರುವ ಅರ್ಜಿಯಲ್ಲಿನ ವಿವರಗಳನ್ನು ಅರ್ಹತೆಯ ಆಧಾರದ ಮೇಲೆ ತಿದ್ದುಪಡಿ ಮಾಡಿಕೊಳ್ಳಲೂ ಸಹ ಅವಕಾಶ ಕಲ್ಪಿಸಿದೆ. ವಿವರವಾದ ಮಾಹಿತಿಯನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪಡೆಯಬಹುದು.

ಈ ಮೇಲ್ಕಂಡ ಪತ್ರಿಕಾ ಪ್ರಕಟಣೆಯನ್ನು ಅಭ್ಯರ್ಥಿಗಳ ಹಿತದೃಷ್ಟಿಯಿಂದ ತಮ್ಮ ದಿನಪತ್ರಿಕೆಯಲ್ಲಿ ಪ್ರಾಮುಖ್ಯವಾಗಿ ಪ್ರಕಟಿಸಲು ಕೋರಿದೆ.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in